ದಿ: 15-02-2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಂದುವರಿದ ಮುಖ್ಯ ವಿಚಾರಣೆ:</u> ವಾದಿ ಪರ ವಕೀಲರಿಂದ**

ಸಾಕ್ಷಿಯು ತನ್ನ ಮಗಳ ಎಸ್.ಎಸ್.ಎಲ್.ಸಿ ಅಂಕಪಟ್ಟಿಯನ್ನು ಹಾಜರಿಸಿದ್ದು ಅದನ್ನು ನಿಪಿ-1 ಎಂದು, ಸಾಕ್ಷಿಯು ಪ್ರತಿವಾದಿಗಳಿಗೆ ನೀಡಿದಂತಹ ನೋಟೀಸಿನ ಕಚೇರಿ ಪ್ರತಿಯನ್ನು ನೋಡುತ್ತಿದ್ದು ಅದನ್ನು ನಿಪಿ-2 ಎಂದು, ಬ್ಯಾಪ್ಟೀಸ್ ಸರ್ಟಿಫಿಕೇಟನ್ನು ನೋಡುತ್ತಿದ್ದು ಅದನ್ನು ನಿಪಿ-3 ಎಂದು, ಸಾಕ್ಷಿಯು ತನ್ನ ಮೂಲ ಆಧಾರ್ ಕಾರ್ಡ್ ನ್ನು ನೋಡುತ್ತಿದ್ದು ಅದನ್ನು ನಿಪಿ-4 ಎಂದು, ಸಾಕ್ಷಿಯು ತನ್ನ ಮಗಳ ಮೂಲ ಆಧಾರ್ ಕಾರ್ಡ್ ನ್ನು ನೋಡುತ್ತಿದ್ದು ಅದನ್ನು ನಿಪಿ-5 ಎಂದು, ಸಾಕ್ಷಿಯು 4 ಅಂಚೆ ಸ್ವೀಕೃತಿ ಪ್ರತಿಗಳನ್ನು ನೋಡುತ್ತಿದ್ದು ಅವುಗಳನ್ನು ಒಟ್ಟಾಗಿ ನಿಪಿ-6 ಎಂದು, ಸಾಕ್ಷಿಯು 5 ಅಂಚೆ ರಶೀದಿಗಳನ್ನು ಹಾಜರಿಸಿದ್ದು ಅದನ್ನು ಒಟ್ಟಾಗಿ ನಿಪಿ-7 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯಲ್ಲಿ ಕೇಳಿದಂತೆ ಆದೇಶ ಮಾಡಬೇಕಾಗಿ ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲು:** ಪ್ರತಿವಾದಿ ಪರ ವಕೀಲರು ಪ್ರತಿವಾದ ಪತ್ರವನ್ನು ಸಲ್ಲಿಸದ ಕಾರಣ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ:** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು.)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

ಎರಡನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಜೆ.ಎಂ.ಎಫ್.ಸಿ. ಉಡುಪಿ.